ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014-15 : ದಿನಾಂಕ: 30-10-2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ರಾಷ್ಟ್ರೀಯ ಏಕತಾ ದಿನಾಚರಣೆ ಅಂಗವಾಗಿ 'ಏಕತಾ ಓಟ'. | 31-10-2014 ಶುಕ್ರವಾರ ಬೆಳಿಗ್ಗೆ 9-00 ಗಂಟೆಗೆ | ಶ್ರೀ ಕಂಠೀರವ ಕ್ರೀಡಾಂಗಣದಿಂದ ಸಿದ್ದಲಿಂಗಯ್ಯ ವೃತ್ತ, ಕೇಂದ್ರ ಗ್ರಂಥಾಲಯ, ಕೆ.ಆರ್. ವೃತ್ತ ಮೂಲಕ ಸ್ವಾತಂತ್ರ್ಯ ಉದ್ಯಾನದವರೆಗೆ |
| 2.. | ಕರ್ನಾಟಕ ವಿಧಾನ ಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ ಸಭೆ. | 31-10-2014 ಶುಕ್ರವಾರ ಬೆಳಿಗ್ಗೆ 10-00 ಗಂಟೆಗೆ | ಸಮ್ಮೇಳನ ಸಭಾಂಗಣ, ಶಾಸಕರ ಭವನ -2, ಬೆಂಗಳೂರು. |
| 3.. | <u>ಪತ್ರಿಕಾಗೋಷ್ಠಿ:</u><br><br>ಶ್ರೀ ಮೊಹಮ್ಮದ್ ಮೊಹಸಿನ್,<br>ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ | 31-10-2014 ಶುಕ್ರವಾರ ಬೆಳಿಗ್ಗೆ 11-30 ಗಂಟೆಗೆ | ಕಂಠೀರವ ಕ್ರೀಡಾಂಗಣ, ಕಸ್ತೂರಬಾ ರಸ್ತೆ, ಕಾರ್ಪೋರೇಷನ್ ಸರ್ಕಲ್ ಹತ್ತಿರ, ಬೆಂಗಳೂರು . |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ನಕ್ಷತ್ರ ವೀಕ್ಷಣೆ ಕಾರ್ಯಕ್ರಮ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

**ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಸ್ಥೆಯು ಜವಾಹರಲಾಲ್ ನೆಹರೂ ತಾರಾಲಯದಲ್ಲಿ ನವೆಂಬರ್ 2 ರ ಭಾನುವಾರ ಸಂಜೆ 6–30 ಗಂಟೆಗೆ ನಕ್ಷತ್ರ ವೀಕ್ಷಣೆ ಕಾರ್ಯಕ್ರಮವನ್ನು ಏರ್ಪಡಿಸಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 22379725 ಸಂಪರ್ಕಿಸಲು ಕೋರಿದೆ.**

ಸಮ:ಬಾಬು:ಜಿಪಿಆರ್

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)**

ಕರ್ನಾಟಕ ಲೊಕ ಸೇವಾ ಆಯೋಗವು 2012 ನೇ ಸಾಲಿನ ಅಬಕಾರಿ ಇಲಾಖೆಯಲ್ಲಿನ ಉಪ ನಿರೀಕ್ಷಕರ ಮತ್ತು ಅಬಕಾರಿ ರಕ್ಷಕರ (ಪುರುಷ) ಮತ್ತು (ಮಹಿಳೆ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಯ ಕುರಿತಂತೆ ಆಕ್ಷೇಪಣೆ ಸಲ್ಲಿಸಬಯಸುವ ಅಭ್ಯರ್ಥಿಗಳು ಅಧಿಸೂಚನೆಯ ದಿನಾಂಕದಿಂದ 15 ದಿವಸಗಳೊಳಗಾಗಿ "ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು" ಇವರಿಗೆ ಲಿಖಿತ ರೂಪದಲ್ಲಿ ಸಲ್ಲಿಸಲು ಸೂಚಿಸಿದೆ. ನಂತರ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಪ್ರಕಟಣೆ ತಿಳಿಸಿದೆ.

ಸಮ:ಬಾಬು:ಜಿಪಿಆರ್

## ರಾಜ್ಯಪಾಲರಿಂದ ರಾಜ್ಯೋತ್ಸವದ ಶುಭಾಶಯಗಳು

**ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)**

ಕರ್ನಾಟಕದ ರಾಜ್ಯಪಾಲರಾದ ಶ್ರೀ ವಜುಭಾಯಿ ವಾಲ ಅವರು ಕರ್ನಾಟಕ ರಾಜ್ಯೋತ್ಸವ ಶುಭ ಸಂದರ್ಭದಲ್ಲಿ ನಾಡಿನ ಜನತೆಗೆ ಕನ್ನಡ ರಾಜ್ಯೋತ್ಸವ ಶುಭಾಶಯವನ್ನು ಕೋರಿದ್ದಾರೆ.

ಶುಭಾಶಯ ಸಂದೇಶದ ಪೂರ್ಣ ಪಾಠ ಇಂತಿದೆ :" ಕರ್ನಾಟಕ ರಾಜ್ಯದ ಸಮಸ್ತ ಕನ್ನಡಿಗರೆಲ್ಲರೂ ರಾಜ್ಯೋತ್ಸವ ದಿನದಂದು ಸಂಭ್ರಮಿಸಬೇಕಾದ ದಿನವಾಗಿದೆ. ಈ ಸಂದರ್ಭದಲ್ಲಿ ರಾಜ್ಯದ ಸಮಸ್ತ ನಾಗರಿಕ ಬಂಧುಗಳು ಕನ್ನಡನಾಡು, ನುಡಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಹಾಗೂ ನೆಲ, ಜಲ, ಸಂರಕ್ಷಣೆಗಾಗಿ ಕಾಯ ವಾಚಾ ಮನಸಾ ಸಮರ್ಪಣಾ ಭಾವದಿಂದ ಮಾತೃ ಭೂಮಿಯ ಸೇವೆಗೆ ಮತ್ತೊಮ್ಮೆ ಸಂಕಲ್ಪ ತೊಡಬೇಕಾಗಿದೆ. ಈ ಶುಭ ಸಂದರ್ಭದಲ್ಲಿ ರಾಜ್ಯವನ್ನು ಸರ್ವ ರೀತಿಯಲ್ಲೂ ಅರ್ಥಪೂರ್ಣವಾಗಿ

ಸ್ವಚ್ಛವಾಗಿಡುವ ಮೂಲಕ ಪ್ರಧಾನ ಮಂತ್ರಿಗಳ ಸ್ವಚ್ಛ ಭಾರತ ಅಭಿಯಾನಯಡಿಯಲ್ಲಿ 'ಸ್ವಚ್ಛ ಕರ್ನಾಟಕ ' ನಿರ್ಮಾಣಕ್ಕೆ ಪಣತೊಡೋಣ".

"ರಾಜ್ಯದ ಸಮಸ್ತ ಪ್ರಜೆಗಳು ಸುಖ, ಶಾಂತಿ, ಆರೋಗ್ಯ, ನೆಮ್ಮದಿ, ಸಮೃದ್ದಿ ಹಾಗೂ ಸೌಹಾರ್ಧತೆಯಿಂದ ಸಹಬಾಳ್ವೆ ನಡೆಸುವಂತಾಗಲಿ ಎಂದು ಹಾರೈಸುತ್ತಾ ಹಾರ್ದಿಕ ಶುಭಾಶಯವನ್ನು ಕೋರುತ್ತೇನೆ."

ಸಮ:ಬಾಬು:ಜಿಪಿಆರ್

## ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ 10 ವರ್ಷಕ್ಕೂ ಹೆಚ್ಚು ಸೇವೆ ಸಲ್ಲಿಸಿದ ದಿನಗೂಲಿ ನೌಕರರಿಗೆ ಸರ್ಕಾರಿ ಸೌಲಭ್ಯ: ಸಚಿವ ಎಚ್.ಕೆ. ಪಾಟೀಲ

ಬೆಂಗಳೂರು, ಅ. 30 (ಕರ್ನಾಟಕ ವಾರ್ತೆ)–

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 10 ವರ್ಷ ಸೇವೆ ಸಲ್ಲಿಸಿರುವ 2485 ದಿನಗೂಲಿ ನೌಕರರು ಅವರ ಹುದ್ದೆಗೆ ಅನುಸಾರವಾಗಿ ಸರ್ಕಾರಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶ್ರೀ ಎಚ್.ಕೆ. ಪಾಟೀಲ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2006ರ ಏಪ್ರಿಲ್ 10ಕ್ಕೆ 10 ವರ್ಷ ಸೇವೆಯನ್ನು ದಿನಗೂಲಿ ನೌಕರರಾಗಿ ಪೂರ್ಣಗೊಳಿಸಿದ ನೌಕರರಿಗೆ ಅವರ ಹುದ್ದೆಗೆ ಸರಿ ಸಮಾನವಾದ ವೇತನ ಶ್ರೇಣಿ, ತುಟ್ಟಿ ಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ಸರ್ಕಾರಿ ನೌಕರರಿಗೆ ಇರುವ ರಜಾ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದ ಸಚಿವರು 2014ರ ಮೇ ತಿಂಗಳ 8 ರಿಂದ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರ ಅಡಿಯಲ್ಲಿ ಇಲಾಖೆಯ ದಿನಗೂಲಿ ನೌಕರರ ಪಟ್ಟಿಯನ್ನು ಅಧಿಸೂಚಿಸಿ, ಹೊರಡಿಸಿದ ದಿನಾಂಕದಿಂದ ಈ ಸೌಲಭ್ಯಗಳನ್ನು ವಿಸ್ತರಿಸಲಾಗುತ್ತಿದೆ ಎಂದರು. 10 ವರ್ಷ ಸೇವೆ ಸಲ್ಲಿಸಿದ ನೌಕರರ ಮಾಹಿತಿ ಕೆಲವೊಮ್ಮೆ ಪಟ್ಟಿಯಿಂದ ಕೈಬಿಟ್ಟು ಹೋಗಿದ್ದಲ್ಲಿ ಅಂತಹ ನೌಕರರು ತಮ್ಮ ದಾಖಲಾತಿಗಳನ್ನು ಸಂಬಂಧ ಪಟ್ಟ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಸಲ್ಲಿಸಿದಲ್ಲಿ, ಅಂತಹವರ ಹೆಸರುಗಳನ್ನು ಪರಿಶೀಲಿಸಿ, ಪಟ್ಟಿಗೆ ಸೇರ್ಪಡೆ ಮಾಡಲಾಗುವುದು ಎಂದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ 2485 ದಿನಗೂಲಿ ನೌಕರರನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿ ನಿಯಮ 2012ರ ವ್ಯಾಪ್ತಿಗೆ ತರಲಾಗಿದೆ ಎಂದ ಸಚಿವರು ಗ್ರಾಮ ಪಂಚಾಯಿತಿ ಪುನರ್ ವಿಂಗಡಣಾ ಸಮಿತಿಯ ಅಧ್ಯಕ್ಷರಾದ ಶ್ರೀ ಎಸ್.ಜಿ. ನಂಜಯ್ಯನಮಠ ಅವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಮುಂದಿನ ಸಚಿವ ಸಂಪುಟದ ಮುಂದೆ ತರಲಾಗುವುದು. ನಂತರ ಚರ್ಚಿಸಿ, 2015 ರ ಜನವರಿ 1 ನೇ ತಾರೀಖಿನ ವೇಳೆಗೆ ವರದಿಯಲ್ಲಿ ಶಿಫಾರಸು ಮಾಡಿರುವ ಹೊಸ ಗ್ರಾಮ ಪಂಚಾಯಿತಿಗಳನ್ನು ರಚಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಸಹನಾ

# ಭಾರತೀಯ ಪ್ಲೈವುಡ್ ಕೈಗಾರಿಕಾ ಸಂಶೋಧನಾ ಮತ್ತು ತರಬೇತಿ ಸಂಸ್ಥೆ

ಬೆಂಗಳೂರು, ಅ. 30 (ಕರ್ನಾಟಕ ವಾರ್ತೆ)-

ಭಾರತೀಯ ಪ್ಲೈವುಡ್ ಕೈಗಾರಿಕಾ ಸಂಶೋಧನಾ ಮತ್ತು ತರಬೇತಿ ಸಂಸ್ಥೆ (ಐಪಿಐಆರ್‌ಟಿಐ) ಈವರೆಗೂ ಇಲ್ಲಿ 1900 ಜನ ತರಬೇತಿ ಪಡೆದಿದ್ದಾರೆ ಎಂದು ಸಂಸ್ಥೆಯ ನಿರ್ದೇಶಕರಾದ ಡಾ: ಬಿ.ಎನ್. ಮೊಹಂತಿ ತಿಳಿಸಿದರು.

ಅವರು ಇಂದು ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು. ಈ ಸಂಸ್ಥೆ ಭಾರತ ಸರ್ಕಾರದ ಪರಿಸರ ಮತ್ತು ಅರಣ್ಯ ಇಲಾಖೆಗೆ ಸೇರಿದ ಒಂದು ಸ್ವಾಯುತ್ತ ಸಂಸ್ಥೆಯಾಗಿದ್ದು, ಇಲ್ಲಿ ನಿರಂತರ ಸಂಶೋಧನೆ ಅಭಿವೃದ್ಧಿ ತರಬೇತಿ, ಪರೀಕ್ಷೆ ಮತ್ತು ಮೌಲ್ಯವರ್ಧನೆಗಳ ಮೂಲಕ ಸೇವೆ ಸಲ್ಲಿಸುತ್ತಿದೆ ಎಂದು ಅವರು ತಿಳಿಸಿದರು.

ಈವರೆಗೆ ಒಟ್ಟು 1900 ಜನ ತರಬೇತಿ ಪಡೆದಿದ್ದು ಅದರಲ್ಲಿ 550 ಜನ ಸ್ನಾತಕೋತ್ತರ ಡಿಪ್ಲೋಮಾ ಪಡೆದಿದ್ದಾರೆ. ಇದು 11 ತಿಂಗಳ ತರಬೇತಿಯಾಗಿದ್ದು ಇಲ್ಲಿ ತರಬೇತಿ ಪಡೆದಿದ್ದು ಕೈಗಾರಿಕಾ ವಲಯದಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ ಎಂದರು. ಈ ತರಬೇತಿಗೆ ಕೋರ್ಸಿಗೆ ಈ ವರ್ಷ ಬೆಳ್ಳಿಹಬ್ಬದ ಸಂಭ್ರಮ.

ತಮ್ಮ ಸಂಸ್ಥೆ ಕಳೆದ 5 ವರ್ಷಗಳಿಂದ ಬಿದಿರು ಆಧಾರಿತ ಕೈಗಾರಿಕಾ ಉತ್ಪನ್ನಗಳ ಅಭಿವೃದ್ಧಿಯತ್ತ ಗಮನಹರಿಸಿದ್ದು ಈ ಕ್ಷೇತ್ರದಲ್ಲಿ ಹೆಚ್ಚು ಬೇಡಿಕೆಯಿದೆ. ಈ ಉತ್ಪನ್ನಗಳು ಪರಿಸರಸ್ನೇಹಿ ಹಾಗೂ ಉಷ್ಣವನ್ನು ಹೀರುವುದರಿಂದ ರೈಲ್ವೆ ವಲಯದಲ್ಲಿ ಇದಕ್ಕೆ ಬೇಡಿಕೆಯಿದೆ. ಪ್ರಸ್ತುತ 9 ಪೇಟೆಂಟ್‌ಗಳನ್ನು ನೋಂದಾಯಿಸಿದೆ ಹಾಗೂ 40 ತಂತ್ರಜ್ಞಾನ ವಿವಿಮಯ ಯೋಜನೆಗಳನ್ನು ಸರ್ಕಾರ/ಖಾಸಗಿ ಹಾಗೂ ಅಂತಾರಾಷ್ಟ್ರೀಯ ಸಂಸ್ಥೆಗಳಿಗೆ ಹಮ್ಮಿಕೊಂಡಿದೆ ಎಂದರು.

ಪ್ರಸ್ತುತ 26 ವಿದ್ಯಾರ್ಥಿಗಳು ಈ ಕೋರ್ಸ್‌ನ್ನು ಯಶಸ್ವಿಯಾಗಿ ಪೂರೈಸಿ ಮರ ಹಾಗೂ ಪ್ಯಾನೆಲ್ ವಲಯದಲ್ಲಿ ಉದ್ಯೋಗ ನಿರ್ವಹಿಸುತ್ತಿದ್ದಾರೆ.

ಬಿದಿರಿನಿಂದ ವಿನೂತನ ಪ್ರಯೋಗಗಳು ಉದಾ: ಶೆಲ್ಫ್‌ಗಳು, ಪಾರ್ಟಿಷನ್, ಚಾಪೆಗಳು ಹೀಗೆ ಅನೇಕ ಉತ್ಪನ್ನಗಳನ್ನು ತಯಾರಿಸಬಹುದಾಗಿದೆ. ಅಲ್ಲದೆ ವಿವಿಧ ಪ್ಲೈವುಡ್ ಕಂಪನಿಗಳ ಗುಣಮಟ್ಟ ಪರಿಶೀಲಿಸಿ ಐ.ಎಸ್.ಒ. ಸರ್ಟಿಫಿಕೇಟ್ ನೀಡುವುದು ಸಹ ನಮ್ಮ ಸಂಸ್ಥೆಯ ಜವಾಬ್ದಾರಿ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಸಂಸ್ಥೆಯ ಜಂಟಿ ನಿರ್ದೇಶಕರಾದ ಎಸ್.ಆರ್. ನಾಥ್ ಹಾಗೂ ವಿಜ್ಞಾನಿ ಸುಜಾತ ಸಹ ವಿಚಾರ ವಿನಿಮಯ ಮಾಡಿಕೊಂಡರು.

ಕವನ/ಕೆಎಂ

## ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಉತ್ತಮ: ಗೃಹ ಸಚಿವ ಕೆ.ಜೆ. ಜಾರ್ಜ್

ಬೆಂಗಳೂರು, ಅ. 30 (ಕರ್ನಾಟಕ ವಾರ್ತೆ)-

ರಾಜ್ಯದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಕಾನೂನು ಸುವ್ಯವಸ್ಥೆ ಉತ್ತಮಗೊಂಡಿದೆ ಎಂದು ಗೃಹ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿರೋಧ ಪಕ್ಷದ ನಾಯಕರು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಹೇಳಿರುವುದರಲ್ಲಿ ಹುರುಳಿಲ್ಲ. ನಮ್ಮ ಸರ್ಕಾರ ಬಂದ ಮೇಲೆ ಸಮಾಜ ಘಾತುಕ ಶಕ್ತಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಿದೆ ಎಂದರು.

ರಾಜ್ಯದಲ್ಲಿ ಇತ್ತೀಚೆಗೆ ನಡೆದ ಐಎಎಸ್ ಅಧಿಕಾರಿ ರಶ್ಮಿ ಅವರ ಮೇಲಿನ ಹಲ್ಲೆ ಪ್ರಕರಣ, ಮಣಿಪುರ ವಿದ್ಯಾರ್ಥಿಗಳ ಮೇಲಿನ ಹಲ್ಲೆ ಪ್ರಕರಣ ಮತ್ತು ಮಕ್ಕಳ ರಕ್ಷಣೆಗೆ ಕ್ರಮ ಕೈಗೊಂಡಿಲ್ಲ ಎಂಬ ವಿರೋಧ ಪಕ್ಷಗಳ ಆರೋಪಕ್ಕೆ ಉತ್ತರಿಸಿದ ಸಚಿವರು, ರಶ್ಮಿ ಅವರ ಪ್ರಕರಣದಲ್ಲಿ ಈಗಾಗಲೇ 32 ಜನರ ಮೇಲೆ ಕ್ರಮ ಕೈಗೊಳ್ಳಲಾಗಿದ್ದು, ಅಲ್ಲಿನ ಪಿಎಸ್‌ಐ ಅವರನ್ನು ಅಮಾನತು ಪಡಿಸಲಾಗಿದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ಸಿಐಡಿ ತನಿಖೆ ನಡೆಯುತ್ತಿದೆ. ವರದಿ ಬಂದ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಮಣಿಪುರ ವಿದ್ಯಾರ್ಥಿಗಳ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಈಗಾಗಲೇ ಮೂವರನ್ನು ಬಂಧಿಸಿ, ವಿಚಾರಣೆ ನಡೆಸಲಾಗಿದೆ ಎಂದ ಅವರು, ಅಪರಾಧವೆಸಗುವವರನ್ನು ಖಂಡನೆ ಮಾಡುವುದನ್ನು ಬಿಟ್ಟು, ಸರ್ಕಾರವನ್ನು ದೂಷಿಸುವುದು ಸರಿಯಲ್ಲ ಎಂದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಗಣೇಶ, ರಂಜಾನ್ ಹಬ್ಬಗಳು, ಪ್ರಧಾನ ಮಂತ್ರಿಗಳು, ಉಪ ರಾಷ್ಟ್ರಪತಿಗಳ ಭೇಟಿ ಸಂದರ್ಭದಲ್ಲಿ ಭದ್ರತಾ ವ್ಯವಸ್ಥೆಯನ್ನು ಉತ್ತಮ ನಿಭಾಯಿಸಲಾಗಿದೆ. ಈ ಸಂದರ್ಭಗಳಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆದಿಲ್ಲ. ಇದರಿಂದಲೇ ರಾಜ್ಯದ ಕಾನೂನು ಸುವ್ಯವಸ್ಥೆ ಉತ್ತಮ ವಾಗಿದೆ ಎಂಬುದು ವೇದ್ಯವಾಗಿದೆ ಎಂದು ಅವರು ತಿಳಿಸಿದರು.

ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿದ್ದು, 8500 ಪೊಲೀಸ್ ಸಿಬ್ಬಂದಿ ಮತ್ತು 290 ಪಿಎಸ್‌ಐ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.